5
16/14

4

**ಮಾನ್ಯ ವಿಧಾನ ಪರಿಷತ್ ಸದಸ್ಯರುಗಳಾದ ಶ್ರೀ**
**ಶ್ರೀ ಎಸ್.ಎಲ್. ಭೋಜೇಗೌಡ, ಪುಟ್ಟಣ್ಣ, ಶಶೀಲ್ ಜಿ. ನಮೋಶಿ, ಮತ್ತು ಎಸ್.ವಿ.ಸಂಕನೂರ, ಡಿ.ಟಿ.ಶ್ರೀನಿವಾಸ್ (ಡಿ.ಟಿ.ಎಸ್) ಹಾಗೂ ರಾಮೋಜಿಗೌಡ ಇವರು ಮಂಡಿಸಿರುವ ನಿಯಮ-330 ಕ್ಕೆ ಉತ್ತರ ನೀಡುವ ಕುರಿತು**

**ವಿಷಯ:-**

ಸರ್ಕಾರಿ ಶಾಲೆಗಳಲ್ಲಿ/ ಅನುದಾನಿತ / ಅನುದಾನರಹಿತ ಶಾಲೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಶಿಕ್ಷಕರುಗಳಿಗೆ ಸಿಗಬೇಕಾದ ಮೂಲಭೂತ ಸೌಲಭ್ಯಗಳು ಕಾಲಕಾಲಕ್ಕೆ ಸಿಗದೇ, ಶಿಕ್ಷಕರುಗಳು ಪರಿತಪಿಸುವಂತೆ ಆಗಿರುವುದು ಶೋಚನೀಯ ಸಂಗತಿ. ಸರ್ಕಾರಿ/ ಅನುದಾನಿತ/ಅನುದಾನರಹಿತ ಶಾಲೆಗಳ ಶಿಕ್ಷಕರುಗಳು ಹಲವು ರೀತಿಯ ಬೇಡಿಕೆ ಮತ್ತು ಸಮಸ್ಯೆಗಳನ್ನು ಎದುರಿಸುತ್ತಿದ್ದು, ಶಿಕ್ಷಕರ ಗೋಳನ್ನು ಸರ್ಕಾರವು ಕೇಳುವುದರಲ್ಲಿ ವಿಫಲವಾಗಿದೆ. ಶಿಕ್ಷಕರ ಸಮಸ್ಯೆಗಳು ಕಗ್ಗಂಟ್ಟನಿಂದ ಕೂಡಿದ್ದೂ, ಅದನ್ನು ಬಿಡುಸುವಲ್ಲಿ ಸರ್ಕಾರವು ವಿಫಲವಾಗಿದೆ. ಸದರಿ ಶಿಕ್ಷಕರುಗಳಿಗೆ ಕಾಲ ಕಾಳಕ್ಕೆ ಬಡ್ತಿ, ವಿವಿಧ ರೀತಿಯ ಸೌಲಭ್ಯಗಳು ದೊರಕುತ್ತಿದೆಯೇ ಎಂಬುದು ಅನುಮಾನ. ಆದ್ದರಿಂದ, ಶಿಕ್ಷಕರುಗಳ ಹಲವಾರು ಸಮಸ್ಯೆಗಳ ಬಗ್ಗೆ ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರ ಬಳಿ ಪ್ರಸ್ತಾಪಿಸಲು ಅನುಮತಿ ಕೋರುತ್ತೇನೆ.

**ಉತ್ತರ:**

**ಪ್ರಾಥಮಿಕ ಶಾಲಾ ಶಿಕ್ಷಕರಿಂದ ಪ್ರೌಢಶಾಲಾ ಸಹಶಿಕ್ಷಕರ ಹುದ್ದೆಗೆ ಬಡ್ತಿ ಹಾಗೂ ಪ್ರೌಢಶಾಲಾ ಸಹ ಶಿಕ್ಷಕರಿಂದ ಮುಖ್ಯ ಶಿಕ್ಷಕರು ಹಾಗೂ ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನ್ಯಾಸಕರ ಹುದ್ದೆಗೆ ಬಡ್ತಿ ನೀಡುವ ಬಗ್ಗೆ:**

1. ಪ್ರಾಥಮಿಕ ಶಾಲಾ ಶಿಕ್ಷಕರ ಹುದ್ದೆಯಿಂದ ಪ್ರೌಢಶಾಲಾ ಸಹಶಿಕ್ಷಕರ ಹುದ್ದೆಗೆ ಬಡ್ತಿಗೆ ಸಂಬಂಧಿಸಿದಂತೆ 2016 ರ ವೃಂದ ಮತ್ತು ನೇಮಕಾತಿ ನಿಯಮಗಳು ಚಾಲ್ತಿಯಲ್ಲಿದ್ದು, ಅದರಲ್ಲಿ ಪ್ರಾಥಮಿಕ ಶಾಲಾ ಶಿಕ್ಷಕರ (ಪಿ.ಎಸ್.ಟಿ) ವೃಂದಕ್ಕೆ ಅರ್ಹತೆ ಮತ್ತು ಜೇಷ್ಠತೆ ಹೊಂದಿರುವ ಶಿಕ್ಷಕರಿಗೆ ಬಡ್ತಿ ನೀಡಲು ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ಅವಕಾಶ ಕಲ್ಪಿಸಲಾಗಿರುತ್ತದೆ. ಆದರೆ ಪದವೀಧರ ಪ್ರಾಥಮಿಕ ಶಾಲಾ (ಜಿ.ಪಿ.ಟಿ) ಶಿಕ್ಷಕರ ಹುದ್ದೆಗೆ ಬಡ್ತಿಗೆ ಸಂಬಂಧಿಸಿದಂತೆ ಮಾನದಂಡಗಳು ನಿಗದಿಯಾಗಿರುವುದಿಲ್ಲ. ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ 6 ರಿಂದ 8ನೇ ತರಗತಿ ಪದವೀಧರ ಪ್ರಾಥಮಿಕ ಶಿಕ್ಷಕರಿಗೆ ಪ್ರೌಢಶಾಲಾ ಸಹಶಿಕ್ಷಕರು ಗ್ರೇಡ್-2 ಹುದ್ದೆಗೆ ಬಡ್ತಿ ನೀಡುವ ಕುರಿತು ಮಾನ್ಯ ಕೆ.ಎ.ಟಿ ಅರ್ಜಿ ಸಂಖ್ಯೆ:3443-3503/2020 ಮತ್ತು 857-917/2021 ಗಳಲ್ಲಿ ಶ್ರೀ ನಾರಾಯಣ ಬಾಳಪ್ಪ ಮತ್ತಿತರರು ದಾವೆ ದಾಖಲಿಸಿದ್ದು ಸದರಿ ದಾವೆಯಲ್ಲಿ ಮಾನ್ಯ ನ್ಯಾಯಾಲಯವು ದಿನಾಂಕ:12.05.2021 ರಂದು ತೀರ್ಪು ನೀಡಿರುತ್ತದೆ.
2. ಸದರಿ ತೀರ್ಪಿನಲ್ಲಿ ಪ್ರಾಥಮಿಕ ಶಾಲಾ ಶಿಕ್ಷಕರ ಹುದ್ದೆಯಿಂದ ಪ್ರೌಢಶಾಲಾ ಸಹ ಶಿಕ್ಷಕರ ಹುದ್ದೆಗೆ ನೀಡಿರುವ ಬಡ್ತಿಗಳನ್ನು ಹಿಂಪಡೆಯಲು ಸೂಚಿಸಲಾಗಿರುತ್ತದೆ. ಆದ್ದರಿಂದ ಮಾನ್ಯ ಕೆ.ಎ.ಟಿ ಅರ್ಜಿ ಸಂಖ್ಯೆ:3443-3503/2020 ದಿನಾಂಕ:12.05.2021 ರ ತೀರ್ಪು ಬಂದ ನಂತರ ಸರ್ಕಾರಿ ಪ್ರಾಥಮಿಕ ಶಾಲಾ

ಶಿಕ್ಷಕರ ಹುದ್ದೆಯಿಂದ ಪ್ರೌಢಶಾಲಾ ಸಹ ಶಿಕ್ಷಕರ ಹುದ್ದೆಗೆ ಬಡ್ತಿ ನೀಡುವ ಪ್ರಕ್ರಿಯೆಯನ್ನು ತಡೆಹಿಡಿಯಲು ಸೂಚಿಸಲಾಗಿರುತ್ತದೆ.

3. ಕೆ.ಎ.ಟಿ ಅರ್ಜಿ ಸಂಖ್ಯೆ:3443-3503/2020 ಮತ್ತು 857-917/2021 ತೀರ್ಪನ್ನು ಪ್ರಶ್ನಿಸಿ ಘನ ಉಚ್ಚನ್ಯಾಯಾಲಯ, ಬೆಂಗಳೂರು, ಇಲ್ಲಿ ರಿಟ್ ಅರ್ಜಿ ಸಂಖ್ಯೆ : 16936/2021, 18205/2021 ಮತ್ತು 11088/2022 ಅನ್ನು ದಾಖಲಿಸಲಾಗಿರುತ್ತದೆ. ಸದರಿ ರಿಟ್ ಅರ್ಜಿಗಳಲ್ಲಿ ನ್ಯಾಯಾಲಯವು ದಿನಾಂಕ:31.08.2024 ರಂದು ತೀರ್ಪು ನೀಡಿದ್ದು, ರಿಟ್ ಅರ್ಜಿಗಳನ್ನು ವಜಾಗೊಳಿಸಿರುತ್ತದೆ.
4. ಕರ್ನಾಟಕ ಶಿಕ್ಷಣ ಇಲಾಖೆ ಸೇವೆಗಳು (ಸಾರ್ವಜನಿಕ ಶಿಕ್ಷಣ ಇಲಾಖೆ)(ನೇಮಕಾತಿ)(ತಿದ್ದುಪಡಿ)ನಿಯಮಗಳು, 2024 ಅನ್ನು ಪ್ರಕಟಿಸಿದ್ದು, ಅದರಲ್ಲಿ ಪದವೀಧರ ಪ್ರಾಥಮಿಕ ಶಾಲಾ (ಜಿ.ಪಿ.ಟಿ) ಶಿಕ್ಷಕರಿಗೂ ಸಹ ಬಡ್ತಿ ಅವಕಾಶವನ್ನು ಕಲ್ಪಿಸಲಾಗಿರುತ್ತದೆ.
5. ಪ್ರಸ್ತುತ ಕೆ.ಎ.ಟಿ ಅರ್ಜಿ ಸಂಖ್ಯೆ:3443-3503/2020 ಮತ್ತಿತರ ದಾವೆಗಳ ಅನುಷ್ಠಾನ ಸಂಬಂಧ ಮಾನ್ಯ ಕೆ.ಎ.ಟಿ ಇಲ್ಲಿ ನಿಂದನಾ ದಾವೆ ಸಂಖ್ಯೆ: 667-697/2024, 87-163/2025 ಮತ್ತು 164-274/2025 ಗಳನ್ನು ಅರ್ಜಿದಾರರು ದಾಖಲಿಸಿರುತ್ತಾರೆ.
6. ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯ ರಿಟ್ ಪಿಟಿಷನ್ ಸಂಖ್ಯೆ : 16936/2021 ಮತ್ತಿತರ ಸಂಬಂಧಿತ ದಾವೆಗಳ ತೀರ್ಪನ್ನು ಪುನರ್ ಪರಿಶೀಲಿಸಲು ಕೋರಿ ಮಾನ್ಯ ಉಚ್ಚ ನ್ಯಾಯಾಲಯ ಬೆಂಗಳೂರು ಇಲ್ಲಿ Review Petition ಸಂಖ್ಯೆ:433/2025 ಅನ್ನು ದಾಖಲಿಸಲಾಗಿರುತ್ತದೆ.
7. ಕೆ.ಎ.ಟಿ ಯಲ್ಲಿ ದಾಖಲಾಗಿರುವ ನಿಂದನಾ ದಾವೆಗಳು ಮುಕ್ತಾಯಗೊಂಡ ನಂತರ ಮತ್ತು ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ದಾಖಲಿಸಿರುವ Review Petition ಸಂಖ್ಯೆ:433/2025 ನಲ್ಲಿ ತೀರ್ಪು ಬಂದ ನಂತರ ಪ್ರಾಥಮಿಕ ಶಾಲಾ ಶಿಕ್ಷಕರ ಹುದ್ದೆಯಿಂದ ಪ್ರೌಢಶಾಲಾ ಸಹ ಶಿಕ್ಷಕರ ಹುದ್ದೆಗೆ ನಿಯಮಗಳನುಸಾರ ಬಡ್ತಿ ನೀಡಲು ಕ್ರಮವಹಿಸಬೇಕಾಗಿರುತ್ತದೆ.
8. ಸರ್ಕಾರಿ ಪ್ರೌಢಶಾಲಾ ಸಹ ಶಿಕ್ಷಕರ ಹುದ್ದೆಯಿಂದ ಪ್ರೌಢಶಾಲಾ ಮುಖ್ಯ ಶಿಕ್ಷಕರ ಹುದ್ದೆಗೆ ಮುಂಬಡ್ತಿ ನೀಡಲು ನಿಯಮಾನುಸಾರ ಕ್ರಮ ವಹಿಸಲಾಗುತ್ತಿದೆ.
9. ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಇವರಿಗೆ ಸರ್ಕಾರಿ ಪ್ರೌಢಶಾಲಾ ಸಹ ಶಿಕ್ಷಕರ ವೃಂದದಿಂದ ಸರ್ಕಾರಿ ಪದವಿಪೂರ್ವ ಕಾಲೇಜುಗಳ ಉಪನ್ಯಾಸಕರ ವೃಂದಕ್ಕೆ ಬಡ್ತಿ ನೀಡುವ ಸಂಬಂಧ ಅರ್ಹತಾ ಪರೀಕ್ಷೆ ನಡೆಸಲು ಅಧಿಸೂಚನೆ ಹೊರಡಿಸುವಂತೆ ದಿನಾಂಕ:27.11.2025 ರಲ್ಲಿ ಶಾಲಾ ಶಿಕ್ಷಣ (ಪದವಿ ಪೂರ್ವ) ಇಲಾಖೆಯಿಂದ ಕೋರಲಾಗಿದೆ. ಅದರಂತೆ ಕೇಂದ್ರಿಯ ದಾಖಲಾತಿ ಘಟಕ, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು ಇವರು ಅರ್ಹತಾ ಪರೀಕ್ಷೆ ನಡೆಸಿ, ಅರ್ಹ ಸಹ ಶಿಕ್ಷಕರ ಪಟ್ಟಿಯನ್ನು ಸಲ್ಲಿಸಿದ ನಂತರ ಬಡ್ತಿ ನೀಡಲು ನಿಯಮಾನುಸಾರ ಕ್ರಮ ಕೈಗೊಳ್ಳಲಾಗುವುದು.

**ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲಾ ಶಿಕ್ಷಕರಿಗೆ ಸಂಬಂಧಿಸಿದಂತೆ:**

ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲಾ ಶಿಕ್ಷಕರಿಗೆ ಸಂಬಂಧಿಸಿದಂತೆ, ಕಾಲ-ಕಾಲಕ್ಕೆ ಚಾಲ್ತಿ ನಿಯಮಗಳನುಸಾರ ನೀಡಬೇಕಾದ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ. ರಾಜ್ಯದ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರುಗಳಿಗೆ ಪ್ರತಿ ಮಾಹೆಯ 05ನೇ ತಾರೀಖಿನೊಳಗೆ ಸಕಾಲದಲ್ಲಿ ವೇತನ ಪಾವತಿಯಾಗುವಂತೆ ಕ್ರಮವಹಿಸಲಾಗಿದೆ.

ಆದಾಗ್ಯೂ ಕೆಲವೊಂದು ಬೇಡಿಕೆಗಳಿಗೆ ಸಂಬಂಧಿಸಿದಂತೆ. ಆರ್ಥಿಕ ವೆಚ್ಚಗಳನ್ನು ಮತ್ತು ಸರ್ಕಾರದ ನೀತಿಯ ವಿಷಯಗಳು ಹಾಗೂ ಶಿಕ್ಷಕರ ಸಮಸ್ಯೆಗಳ ಕುರಿತು ಕಾಲ-ಕಾಲಕ್ಕೆ ಪ್ರಸ್ತಾವನೆಗಳನ್ನು ನಿಯಮಾನುಸಾರ ಇತ್ಯರ್ಥಪಡಿಸಲು ಕ್ರಮವಹಿಸಲಾಗುತ್ತಿದೆ. ಕಾಲ-ಕಾಲಕ್ಕೆ ಸೇವಾ ಜೇಷ್ಠತಾ ಆಧಾರದ ಮೇಲೆ ಪದೋನ್ನತಿ / ಬಡ್ತಿಗಳನ್ನು ಚಾಲ್ತಿ ನಿಯಮಾನುಸಾರ ನೀಡಲಾಗುತ್ತಿದೆ. ಶಿಕ್ಷಕರುಗಳ ವಾರ್ಷಿಕ ವೇತನ ಬಡ್ತಿ ಕಾಲಮಿತಿ ಬಡ್ತಿ, ಸ್ವಯಂ ಚಾಲಿತ ವೇತನ ಬಡ್ತಿ ಮತ್ತು ವಿಶೇಷ ವೇತನ ಬಡ್ತಿಗಳನ್ನು ಹಾಗೂ ವೈದ್ಯಕೀಯ ಮರುಪಾವತಿ ವೆಚ್ಚದೊಂದಿಗೆ ಇತರ ಭತ್ಯೆಗಳನ್ನು ಸಹ ವಿಳಂಬಕ್ಕೆ ಅವಕಾಶ ನೀಡದಂತೆ ಕ್ರಮವಹಿಸಲು ಸಂಬಂಧಪಟ್ಟ ಸಕ್ಷಮ ಪ್ರಾಧಿಕಾರಿಗಳಿಗೆ ಅಗತ್ಯ ಸೂಚನೆಗಳನ್ನು ಕಾಲ ಕಾಲಕ್ಕೆ, ನೀಡಲಾಗುತ್ತಿದೆ. ಕೆಲವು ವಿಶೇಷ ಪ್ರಕರಣಗಳಲ್ಲಿ ನ್ಯಾಯಾಲಯದ ನಿರ್ದೇಶನಗಳನುಸಾರ ನೀಡಬೇಕಾದ ಭತ್ಯೆಗಳನ್ನು ಕಾಲಮಿತಿಯೊಳಗೆ ನೀಡಲಾಗುತ್ತಿದೆ.

**ಖಾಸಗಿ ಅನುದಾನಿತ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಿಗೆ ಸಂಬಂಧಿಸಿದಂತೆ**

ಖಾಸಗಿ ಅನುದಾನಿತ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಿಗೆ ಸಂಬಂಧಿಸಿದಂತೆ ಸರ್ಕಾರದ ವತಿಯಿಂದ ವೇತನಾನುದಾನಕ್ಕೆ ಸಂಬಂಧಿಸಿದ ಸೌಲಭ್ಯಗಳನ್ನು ನೀಡಲಾಗುತ್ತಿದೆ. ಈ ಅನುದಾನಿತ ಶಿಕ್ಷಕರುಗಳಿಗೆ ಸಂಬಂಧಿಸಿದಂತೆ ಬಡ್ತಿ ಹಾಗೂ ವೇತನಾನುದಾನಕ್ಕೆ ಸಂಬಂಧಿಸಿದ ಇತರೆ ಸೌಲಭ್ಯಗಳನ್ನು ಮಂಜೂರಾತಿ ಮಾಡುವ ಪ್ರಾಧಿಕಾರ ಶಿಕ್ಷಣ ಮಸೂದೆಗಳನ್ವಯ ಸಂಬಂಧಿಸಿದ ಶಾಲಾ ಆಡಳಿತ ಮಂಡಳಿಗಳಾಗಿರುತ್ತವೆ. ಸದರಿ ಶಿಕ್ಷಕರುಗಳಿಗೆ ಕಾಲಕಾಲಕ್ಕೆ, ವಾರ್ಷಿಕ ಬಡ್ತಿ ಹಾಗೂ ಇತರೆ ಕಾಲಮಿತಿ ಹೆಚ್ಚುವರಿ ಸ್ಥಗಿತ ವೇತನ ಬಡ್ತಿಗಳನ್ನು ಮಂಜೂರು ಮಾಡಿ ಅನುಮೋದನೆಗೆ ಸಲ್ಲಿಸಿದಲ್ಲಿ ಜಿಲ್ಲಾ ಉಪನಿರ್ದೇಶಕರ ಹಂತದಲ್ಲಿ ಅನುಮೋದನೆಗೆ ಕ್ರಮವಹಿಸಲಾಗುತ್ತದೆ. ಅನುದಾನಿತ ಪ್ರೌಢಶಾಲೆಗಳ ಶಿಕ್ಷಕರು/ಸಿಬ್ಬಂದಿಗಳಿಗೆ ಶಿಸ್ತು ಕ್ರಮ ಬಾಕಿ ಇದ್ದಲ್ಲಿ ಶಿಸ್ತು ಪ್ರಾಧಿಕಾರವಾದ ಆಡಳಿತ ಮಂಡಳಿ ಶಿಸ್ತು ಪ್ರಕರಣ ಇತ್ಯರ್ಥವಾಗುವವರೆಗೆ ಸದರಿ ಬಡ್ತಿಗಳನ್ನು ಕಾಲಕಾಲಕ್ಕೆ, ನೀಡದೇ ಇದ್ದು ಪ್ರಕರಣ ಇತ್ಯರ್ಥವಾದ ನಂತರ ಮಂಜೂರಾತಿಗೆ ಆಡಳಿತ ಮಂಡಳಿ ಕ್ರಮವಹಿಸಿದ್ದಲ್ಲಿ ಸಕ್ಷಮ ಪ್ರಾಧಿಕಾರದಿಂದ ಅನುಮೋದನೆಗೆ ಕ್ರಮವಹಿಸಲಾಗುವುದು.'

ಖಾಸಗಿ ಅನುದಾನರಹಿತ ಶಾಲೆಗಳಿಗೆ ಸಂಬಂಧಿಸಿದ ಶಿಕ್ಷಕರುಗಳಿಗೆ ಸಂಬಂಧಿಸಿದ ಶಾಲಾ ಆಡಳಿತ ಮಂಡಳಿಯೇ ವೇತನ / ಸೇವಾಭದ್ರತೆ ಸೌಲಭ್ಯಗಳನ್ನು ಶಿಕ್ಷಣ ಮಸೂದೆ ನಿಯಮಗಳನ್ವಯ ನೀಡಬೇಕಿರುತ್ತದೆ. ಈ ಬಗ್ಗೆ ಇಲಾಖಾ ಸುತ್ತೋಲೆಗಳ ಮೂಲಕ ಕ್ರಮವಹಿಸಲು ಆಡಳಿತ ಮಂಡಳಿಗಳಿಗೆ ತಿಳಿಸಲಾಗಿರುತ್ತದೆ.

**ಖಾಸಗಿ ಅನುದಾನರಹಿತ ಪ್ರಾಥಮಿಕ ಮತ್ತು ಪ್ರೌಢಶಾಲೆಗಳ ಶಿಕ್ಷಕರಿಗೆ ಸಂಬಂಧಿಸಿದಂತೆ:-**

ಖಾಸಗಿ ಅನುದಾನರಹಿತ ಪ್ರಾಥಮಿಕ ಮತ್ತು ಪ್ರೌಢಶಾಲೆಗಳ ಶಾಲೆಗಳಿಗೆ ಸಂಬಂಧಿಸಿದ ಶಿಕ್ಷಕರುಗಳಿಗೆ ಸಂಬಂಧಿಸಿದ ಶಾಲಾ ಆಡಳಿತ ಮಂಡಳಿಯೇ ವೇತನ / ಸೇವಾಭದ್ರತೆ ಸೌಲಭ್ಯಗಳನ್ನು ಶಿಕ್ಷಣ ಮಸೂದೆ ನಿಯಮಗಳನ್ವಯ ನೀಡಬೇಕಿರುತ್ತದೆ. ಈ ಬಗ್ಗೆ ಇಲಾಖಾ ಸುತ್ತೋಲೆಗಳ ಮೂಲಕ ಕ್ರಮವಹಿಸಲು ಆಡಳಿತ ಮಂಡಳಿಗಳಿಗೆ ಸೂಚನೆ ನೀಡಲಾಗಿದೆ

**ಸಂಖ್ಯೆ: ಇಪಿ 386 ಪಿಜಿಸಿ 2025**

**(ಎಸ್. ಮಧುಬಂಗಾರಪ್ಪ )**
**ಶಾಲಾ ಶಿಕ್ಷಣ ಮತ್ತು ಸಾಕ್ಷರತಾ**
**ಸಚಿವರು**

(93)

(6) 16/12

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ. ಪ್ರತಾಪ್ ಸಿಂಹ ನಾಯಕ್ ಕೆ. ಮತ್ತು ಇತರರು ನಿಯಮ 330 ರ ಅಡಿಯಲ್ಲಿ ಮಂಡಿಸಿರುವ ಗಮನ ಸೆಳೆಯುವ ಸೂಚನೆಯ ಈ ಕೆಳಕಂಡ ಪ್ರಶ್ನೆಗೆ ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರ ಉತ್ತರ.**

ವಿಷಯ:-

ರಾಜ್ಯದ ರಬ್ಬರ್ ಬೆಳೆಗಾರರ ಹಲವಾರು ಬೇಡಿಕೆಗಳು ದೀರ್ಘಕಾಲದಿಂದ ಈಡೇರದಿರುವುದರಿಂದ ಪ್ರಸ್ತುತ ಅತ್ಯಂತ ಸಂಕಷ್ಟದ ಪರಿಸ್ಥಿತಿಗೆ ಸಿಲುಕಿದ್ದಾರೆ. ರಬ್ಬರು ಕೃಷಿಯನ್ನು ತೋಟಗಾರಿಕಾ ಬೆಳೆಯೆಂದು ಪರಿಗಣಿಸಿ ಅದನ್ನು ತೋಟಗಾರಿಕಾ ಇಲಾಖೆಯ ಸುಪರ್ದಿಗೆ ಸೇರಿಸುವುದು, ರಬ್ಬರಿಗೆ ಕಿಲೋ ಒಂದಕ್ಕೆ ಕನಿಷ್ಟ 258 ರೂಪಾಯಿಗಳ ಬೆಂಬಲ ಬೆಲೆ ನಿಗಧಿ ಮಾಡಿ ಬೆಳೆಗಾರರಿಗೆ ದೊರಕುವಂತೆ ಕ್ರಮ ಕೈಗೊಳ್ಳುವುದು, ರಬ್ಬರು ಕೃಷಿಗೂ ಹವಾಮಾನ ಆಧಾರಿತ ವಿಮೆ ಸೌಲಭ್ಯ ಒದಗಿಸಿಕೊಡುವುದು ಹಾಗೂ ರಾಜ್ಯದಲ್ಲಿ ರಬ್ಬರು ಬೆಳೆ ಸ್ಥಿರೀಕರಣ ನಿಧಿ ಸ್ಥಾಪನೆ ಮಾಡಬೇಕೆಂಬ ಒತ್ತಾಯ ಸತತವಾಗಿ ಕೇಳಿ ಬರುತ್ತಿವೆ.

ಇದಿಷ್ಟೇ ಅಲ್ಲದೇ ಪ್ರಸ್ತುತ ರಬ್ಬರು ಬೆಳೆ ವಾಣಿಜ್ಯ ಇಲಾಖೆಯ ವ್ಯಾಪ್ತಿಯಲ್ಲಿದ್ದು, ಅದನ್ನು ಕೃಷಿ ಮತ್ತು ತೋಟಗಾರಿಕಾ ಇಲಾಖೆಯ ಸುಪರ್ದಿಗೆ ತರುವಂತೆ ಮತ್ತು ಕಾಂಪೌಂಡೆಡ್ ಅಥವಾ ಸಂಯುಕ್ತ ರಬ್ಬರಿನ ಆಮದಿನ ಸುಂಕವನ್ನು ಪ್ರಸ್ತುತ 0 ರಿಂದ ಶೇಕಡಾ 5 ಇರುವುದನ್ನು ಗರಿಷ್ಟ ಪ್ರಮಾಣಕ್ಕೆ ಏರಿಸಿ ಆಮದು ಬೆಲೆ ನಿರ್ಧರಿಸುವಂತೆ ಕೇಂದ್ರ ಸರ್ಕಾರಕ್ಕೆ ಸೂಕ್ತ ಪ್ರಸ್ತಾವನೆ ಸಲ್ಲಿಸಬೇಕೆಂಬ ಬೇಡಿಕೆಗಳು ನಿರಂತರವಾಗಿ ರಬ್ಬರ್ ಬೆಳೆಗಾರರಿಂದ ಕೇಳಿ ಬರುತ್ತಿವೆ ಸದರಿ ಎಲ್ಲಾ ಬೇಡಿಕೆಗಳ ಕುರಿತು ಸರ್ಕಾರ ಇದುವರೆಗೆ ಯಾವುದೇ ಅಗತ್ಯ ಕ್ರಮವಹಿಸದೇ ಇರುವುದರಿಂದ ಉಂಟಾಗಿರುವ ಗಂಭೀರ ಸಮಸ್ಯೆ ಕುರಿತು.

****

**ಉತ್ತರ :-**

ರಾಜ್ಯದಲ್ಲಿ ರಬ್ಬರ್ ಬೆಳೆಯನ್ನು ಅಂದಾಜು 50,800 ಹೆಕ್ಟೇರ್ ಪ್ರದೇಶದಲ್ಲಿ ಬೆಳೆಯಲಾಗುತ್ತಿದ್ದು ಉತ್ಪಾದನೆಯು 5.27 ಲಕ್ಷ ಮೆಟ್ರಿಕ್ ಟನ್ ಗಳಾಗಿರುತ್ತದೆ. ರಬ್ಬರ್ ಬೆಳೆಯನ್ನು ಪ್ರಮುಖವಾಗಿ ದಕ್ಷಿಣ ಕನ್ನಡ, ಕೊಡಗು, ಉಡುಪಿ, ಚಿಕ್ಕಮಗಳೂರು ಹಾಗೂ ಶಿವಮೊಗ್ಗ ಜಿಲ್ಲೆಗಳಲ್ಲಿ ಬೆಳೆಯಲಾಗುತ್ತಿದೆ.

ಸದರಿ ಬೆಳೆಗೆ ಸಂಬಂಧಿಸಿದ ಯೋಜನೆಗಳನ್ನು ಪ್ರತ್ಯೇಕವಾಗಿ ಕೇಂದ್ರ ಸರ್ಕಾರದ ವಾಣಿಜ್ಯ ಮತ್ತು ಕೈಗಾರಿಕಾ ಮಂತ್ರಾಲಯದ ಅಧೀನದಲ್ಲಿ ಬರುವ ರಬ್ಬರ್ ಮಂಡಳಿವತಿಯಿಂದ ಅನುಷ್ಠಾನಗೊಳಿಸಲಾಗುತ್ತಿದೆ. ಸದರಿ ಮಂಡಳಿಯನ್ನು 1947 ರಲ್ಲಿ ಸ್ಥಾಪಿಸಲಾಗಿದ್ದು, ಪ್ರಧಾನ ಕಛೇರಿಯು ಕೇರಳದ ಕೊಟ್ಟಾಯಮ್ ಜಿಲ್ಲೆಯಲ್ಲಿರುತ್ತದೆ. ರಾಜ್ಯದಲ್ಲಿ ಪ್ರಮುಖವಾಗಿ ರಬ್ಬರ್ ಬೆಳೆಯನ್ನು ಬೆಳೆಯುವ ಜಿಲ್ಲೆಗಳಾದ ದಕ್ಷಿಣ ಕನ್ನಡ, ಉಡುಪಿ ಹಾಗೂ ಶಿವಮೊಗ್ಗ ಜಿಲ್ಲೆಯಲ್ಲಿ ಸದರಿ ಮಂಡಳಿಯ ಪ್ರಾದೇಶಿಕ ಕಛೇರಿಗಳು ಕಾರ್ಯನಿರ್ವಹಿಸುತ್ತಿವೆ.

**ರಬ್ಬರ್ ಮಂಡಳಿಯ ಉದ್ದೇಶಗಳು:**

1. ರಬ್ಬರ್ ಮಂಡಳಿಯು ರಬ್ಬರ್ ಬೆಳೆಗಾರರಿಗೆ ಫಲಾನುಭವಿ ಆಧಾರಿತ ಯೋಜನೆಗಳನ್ನು ಅನುಷ್ಠಾನಗೊಳಿಸುವುದು.
2. ರಫ್ತು ಉತ್ತೇಜನ ಕಾರ್ಯಕ್ರಮಗಳನ್ನು ಪ್ರೋತ್ಸಾಹಿಸುವುದು.
3. ರಬ್ಬರ್ ಬೆಳೆಗಾರರಿಗೆ ಮಾರುಕಟ್ಟೆ ಕುರಿತು ಮಾಹಿತಿ ಒದಗಿಸುವುದು.
4. ಗುಣಮಟ್ಟ ಪರಿಶೀಲನೆ ಹಾಗೂ ಗ್ರೇಡಿಂಗ್ ಸಂಬಂಧಿತ ಕಾರ್ಯಗಳನ್ನು ನಿರ್ವಹಿಸುವುದು.
5. ರಬ್ಬರ್ ತರಬೇತಿ ಕೇಂದ್ರದ ಮುಖಾಂತರ ಬೆಳೆಗಾರರಿಗೆ ತರಬೇತಿ ಕಾರ್ಯಕ್ರಮಗಳನ್ನು ಆಯೋಜಿಸುವುದು.

ರಬ್ಬರ್ ಬೆಳೆಯ ಸಮಗ್ರ ಅಭಿವೃದ್ಧಿ ಕಾರ್ಯಕ್ರಮಗಳನ್ನು ಮಂಡಳಿವತಿಯಿಂದ ಅನುಷ್ಠಾನಗೊಳಿಸಲಾಗತ್ತಿದೆ. ಕೇಂದ್ರ ಸರ್ಕಾರದ ಕೃಷಿ ಮತ್ತು ರೈತರ ಕಲ್ಯಾಣ ಸಚಿವಾಲಯದ ಅಧೀನದ ಕೃಷಿ ವೆಚ್ಚ ಮತ್ತು ಬೆಲೆಗಳ ಆಯೋಗವು ಪ್ರತಿ ವರ್ಷ ಪ್ರಮುಖವಾದ 22 ಕೃಷಿ ಮತ್ತು ತೋಟಗಾರಿಕೆ ಉತ್ಪನ್ನಗಳಿಗೆ ಕನಿಷ್ಟ ಬೆಂಬಲ ಬೆಲೆಯನ್ನು ನಿಗಧಿಪಡಿಸುತ್ತದೆ. ಸದರಿ ಉತ್ಪನ್ನಗಳ ಪಟ್ಟಿಯಲ್ಲಿ ರಬ್ಬರ್ ಬೆಳೆಯು ಸೇರ್ಪಡೆಗೊಂಡಿರುವುದಿಲ್ಲ.

- ಹವಾಮಾನ ಆಧಾರಿತ ವಿಮೆ ಸೌಲಭ್ಯ ಯೋಜನೆಯಡಿ ರಬ್ಬರ್ ಬೆಳೆಯನ್ನು ಸೇರ್ಪಡೆಗೊಂಡಿರುವುದಿಲ್ಲ.
- ರಬ್ಬರ್ ಬೆಳೆಯ ಆಮದು ಸುಂಕ ಹೆಚ್ಚಿಸುವ ಕುರಿತು ಕೇಂದ್ರ ಸರ್ಕಾರಕ್ಕೆ ಸೂಕ್ತ ಪ್ರಸ್ತಾವನೆಯನ್ನು ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆಯ ಮೂಲಕ ಸಲ್ಲಿಸಬೇಕಾಗಿದ್ದು, ಪರಿಶೀಲಿಸಿ ಕ್ರಮವಹಿಸಲಾಗುವುದು.

**ರಬ್ಬರ್ ಮಂಡಳಿ ವತಿಯಿಂದ ಅನುಷ್ಠಾನಗೊಳಿಸುತ್ತಿರುವ ಯೋಜನೆಗಳ ವಿವರ:**

1. ಸಾಂಪ್ರದಾಯಿಕ ಪ್ರದೇಶಗಳಲ್ಲಿ ತೋಟಗಳ ಅಭಿವೃದ್ಧಿ : ಸದರಿ ಯೋಜನೆಯಡಿ ಸಾಂಪ್ರದಾಯಿಕ ಪ್ರದೇಶಗಳಲ್ಲಿ ರಬ್ಬರ್ ಬೆಳೆಯ ಪ್ರದೇಶ ವಿಸ್ತರಣೆ ಕೈಗೊಳ್ಳಲು ಪ್ರತಿ ಹೆಕ್ಟೇರ್ ಗೆ ರೂ.30,000/- ಗಳ ಸಹಾಯಧನವನ್ನು ಮೊದಲನೇ ವರ್ಷದಲ್ಲಿ ಹಾಗೂ ಮೂರನೇ ವರ್ಷದಲ್ಲಿ ನಿರ್ವಹಣೆಗಾಗಿ ಪ್ರತಿ ಹೆಕ್ಟೇರ್ ಗೆ ರೂ.10,000/- ಗಳ ಸಹಾಯಧನವನ್ನು ನೀಡಲಾಗುವುದು.
2. ಸಾಂಪ್ರದಾಯಕವಲ್ಲದ ಪ್ರದೇಶಗಳಲ್ಲಿ ತೋಟಗಳ ಅಭಿವೃದ್ಧಿ : ಸದರಿ ಯೋಜನೆಯಡಿ ಸಾಂಪ್ರದಾಯಕವಲ್ಲದ ಪ್ರದೇಶಗಳಲ್ಲಿ ರಬ್ಬರ್ ಬೆಳೆಯ ಪ್ರದೇಶ ವಿಸ್ತರಣೆ ಕೈಗೊಳ್ಳಲು ಪ್ರತಿ ಹೆಕ್ಟೇರ್ ಗೆ ರೂ.50,000/- ಗಳ ಸಹಾಯಧನವನ್ನು ಮೊದಲನೇ ವರ್ಷದಲ್ಲಿ ಸೆಪ್ಟೆಂಬರ್ ಮಾಹೆಯಲ್ಲಿ ರೂ.40,000/- ಗಳನ್ನು ಹಾಗೂ ಫೆಬ್ರುವರಿ – ಮಾರ್ಚ್ ಮಾಹೆಗಳಲ್ಲಿ ರೂ.10,000/- ಗಳ ಸಹಾಯಧನವನ್ನು ಎರಡು ಕಂತುಗಳಲ್ಲಿ ನೀಡಲಾಗುವುದು.
3. ಯಂತ್ರೋಪಕರಣಗಳ ಖರೀದಿಗೆ ಸಹಾಯಧನ :

   a) ಸ್ಪ್ರೇಯಿಂಗ್ ಯಂತ್ರಗಳ ಖರೀದಿಗೆ ರೂ.30,000/- ದಂತೆ ಸಹಾಯಧನವನ್ನು ನೀಡಲಾಗುವುದು.

   b) ಲೇಟೆಕ್ಸ್ ಸಂಗ್ರಹಣಾ ಯಂತ್ರಗಳ ಖರೀದಿಗೆ ಗರಿಷ್ಟ ರೂ.40,000/- ದಂತೆ ಸಹಾಯಧನವನ್ನು ನೀಡಲಾಗುವುದು.

   c) ಪರಿಶಿಷ್ಟ ಜಾತಿಯ ರೈತರಿಗೆ ರಬ್ಬರ್ ಶೀಟಿಂಗ್ ರೋಲರ್ ಗಳ ಖರೀದಿಗೆ ಗರಿಷ್ಟ ರೂ.40,000/- ದಂತೆ ಸಹಾಯಧನವನ್ನು ನೀಡಲಾಗುವುದು.
4. ಪರಿಶಿಷ್ಟ ಜಾತಿಯ ರೈತರಿಗೆ ಸಾಂಪ್ರದಾಯಿಕ ಶೈಲಿಯ ಹೊಗೆ ಮನೆ ನಿರ್ಮಾಣ : ಸಾಂಪ್ರದಾಯಿಕ ಶೈಲಿಯ ಹೊಗೆ ಮನೆ ನಿರ್ಮಾಣಕ್ಕೆ ರೂ.40,000/- ದಂತೆ ಸಹಾಯಧನವನ್ನು ನೀಡಲಾಗುವುದು.
5. ರಫ್ತು ಮಾರುಕಟ್ಟೆಗೆ ಪೂರಕವಾದ ನೈಸರ್ಗಿಕ ರಬ್ಬರ್ ಬ್ರಾಂಡಿಂಗ್ ಗೆ ಪ್ರೋತ್ಸಾಹ ಯೋಜನೆಯಡಿ ರೂ.2/- ರಂತೆ ಪ್ರತಿ ಕೆ.ಜಿ. ರಬ್ಬರ್ ಗೆ ಸಹಾಯಧನವನ್ನು ನೀಡಲಾಗುವುದು.

ಮಂಡಳಿಯ ವತಿಯಿಂದ ರಬ್ಬರ್ ಬೆಳೆಗೆ ಸಂಬಂಧಿಸಿದ ಕಾರ್ಯಕ್ರಮಗಳನ್ನು ರೂಪಿಸಿ, ಅನುಷ್ಠಾನಗೊಳಿಸಲಾಗುತ್ತಿದೆ. ಸದರಿ ಮಂಡಳಿಯು ಕೇಂದ್ರ ಸರ್ಕಾರದ ವಾಣಿಜ್ಯ ಮತ್ತು ಕೈಗಾರಿಕೆ ಇಲಾಖಾ ವ್ಯಾಪ್ತಿಗೆ ಒಳಪಟ್ಟಿರುತ್ತದೆ. ರಬ್ಬರ್ ತೋಟಗಾರಿಕೆ ಬೆಳೆಯಾಗಿರುತ್ತದೆ, ಆದರೆ ತೋಟಗಾರಿಕೆ ಇಲಾಖೆಯ ವತಿಯಿಂದ ರಬ್ಬರ್ ಬೆಳೆಗೆ ಸಂಬಂಧಿಸಿದಂತೆ ಯಾವುದೇ ಪ್ರತ್ಯೇಕ ಕಾರ್ಯಕ್ರಮ ಇರುವುದಿಲ್ಲ. ಈ ಬೆಳೆಯನ್ನು ತೋಟಗಾರಿಕೆ ಇಲಾಖೆಗೆ ಒಳಪಡಿಸುವ ಪ್ರಸ್ತಾವನೆ ಇರುವುದಿಲ್ಲ.

**ಸಂಖ್ಯೆ: HORTI 625 HGM 2025**

(signature)

**(ಎಸ್. ಎಸ್. ಮಲ್ಲಿಕಾರ್ಜುನ್)**
**ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು**